# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ. ಎಂ. ನಾಗರಾಜ್ ಇವರು ಶೂನ್ಯ ವೇಳೆಯಲ್ಲಿ ನೀಡಿರುವ ಸೂಚನೆಗೆ ಉತ್ತರ.**

ಪ್ರಶ್ನೆ: ಬೆಳಗಾವಿ ಜಿಲ್ಲೆಯ ಕಾರ್ಮಿಕ ವಿಮಾ ನಿಗಮದ (ESI) ಆಸ್ಪತ್ರೆಗೆ ಹೊಸ ಕಟ್ಟಡ ಮಂಜೂರಾಗಿದ್ದರೂ ಇನ್ನೂ ಆಸ್ಪತ್ರೆ ಶುರು ಮಾಡದೇ ಇರುವ ಕುರಿತು.

---

ಉತ್ತರ: ಬೆಳಗಾವಿ ಜಿಲ್ಲೆಯಲ್ಲಿ ಕಾರ್ಮಿಕ ವಿಮಾ ನಿಗಮದ (ESI) ಆಸ್ಪತ್ರೆ ಕಾರ್ಯಾರಂಭಕ್ಕೆ ಸರ್ಕಾರ ವಹಿಸುತ್ತಿರುವ ಕ್ರಮಗಳ ವಿವರ ಕೆಳಗಿನಂತಿದೆ.

- ಕಾರ್ಮಿಕ ರಾಜ್ಯ ವಿಮಾ ಆಸ್ಪತ್ರೆ, ಬೆಳಗಾವಿ ಇಲ್ಲಿಯ ಕಟ್ಟಡವು ಶಿಥಿಲಾವಸ್ಥೆಗೊಂಡಿದ್ದು, ವಾಸಯೋಗ್ಯವಿಲ್ಲವೆಂದು ನಿರ್ಧರಿಸಲ್ಪಟ್ಟಿರುವುದರಿಂದ, ನೂತನ ಆಸ್ಪತ್ರೆಯನ್ನು ಪ್ರಾರಂಭಿಸುವ ಪ್ರಕ್ರಿಯೆಗೆ ಕಾರ್ಮಿಕ ರಾಜ್ಯ ವಿಮಾ ನಿಗಮವು 2022 ಆಗಸ್ಟನಲ್ಲಿ ಒಪ್ಪಿಗೆ ನೀಡಿರುತ್ತದೆ.

- ಈ ನಿಟ್ಟಿನಲ್ಲಿ ಜಿಲ್ಲಾಡಳಿತದಿಂದ ಕಾರ್ಮಿಕ ರಾಜ್ಯ ವಿಮಾ ಆಸ್ಪತ್ರೆ ನಿಗಮದ ಪ್ರಸ್ತಾವನೆಯ ಮೇರೆಗೆ ಮಚ್ಚೆ ಗ್ರಾಮದಲ್ಲಿ 5.1 ಎಕರೆ ಭೂಮಿಯನ್ನು ಗುರುತಿಸಿದ್ದು, ಆದರೆ ಸದರಿ ಮಚ್ಚೆ ಗ್ರಾಮದಲ್ಲಿ ಗುರುತಿಸಲ್ಪಟ್ಟಿರುವ ಜಾಗದಲ್ಲಿ ನೀರು ಹರಿಯುವ ಸ್ವಾಭಾವಿಕ ಭಾಗವನ್ನು (Natural Water Drainage) ಒಳಗೊಂಡಿದ್ದು, ಕಿರಿದಾದ ರಸ್ತೆಯನ್ನು ಹೊಂದಿರುವ ಕಾರಣ ಕಾರ್ಮಿಕ ರಾಜ್ಯ ವಿಮಾ ನಿಗಮವು ಈ ಸ್ಥಳದಲ್ಲಿ ಆಸ್ಪತ್ರೆಯನ್ನು ನಿರ್ಮಿಸುವುದು ಸೂಕ್ತವಲ್ಲ ಎಂದು ಅಭಿಪ್ರಾಯ ವ್ಯಕ್ತಪಡಿಸಿದೆ. ಇಲಾಖೆಯ ಅಧಿಕಾರಿಗಳು ಈ ಸ್ಥಳಕ್ಕೆ ಭೇಟಿ ನೀಡಿದ್ದು, ಅವರೂ ಸಹ ಈ ಸ್ಥಳದಲ್ಲಿ 100 ಹಾಸಿಗೆ ಆಸ್ಪತ್ರೆಯ ಸುಸಜ್ಜಿತ ಕಟ್ಟಡ ಕಟ್ಟುವುದು ಸಮರ್ಪಕವಲ್ಲ ಎಂದು ಅಭಿಪ್ರಾಯ ಪಟ್ಟಿರುತ್ತಾರೆ.

- ಈ ಹಿನ್ನೆಲೆಯಲ್ಲಿ , ಈಗಿರುವ ಆಸ್ಪತ್ರೆಯ ಜಾಗದಲ್ಲಿಯೇ ಬಹುಮಹಡಿ ಕಟ್ಟಡ ನಿರ್ಮಾಣ ಕಾರ್ಯ ಕೈಗೊಳ್ಳುವ ಪ್ರಸ್ತಾವನೆಯನ್ನು ಸಹಾ ಕಾರ್ಮಿಕ ರಾಜ್ಯ ವಿಮಾ ನಿಗಮವು ಪರಿಶೀಲಿಸುತ್ತಿದೆ.

- ಮುಂದುವರೆದು, ಈಗಿರುವ ಆಸ್ಪತ್ರೆಯ ಕಟ್ಟಡವನ್ನು ತಾತ್ಕಾಲಿಕವಾಗಿ ಸ್ಥಳಾಂತರಿಸಲು ನಿರ್ಧರಿಸಲಾಗಿದ್ದು, ಆಸ್ಪತ್ರೆಯ ಕಟ್ಟಡಕ್ಕಾಗಿ (ಬಾಡಿಗೆ ಆಧಾರದಲ್ಲಿ) ಟೆಂಡರ್ ಪ್ರಕ್ರಿಯೆ ಚಾಲನೆಗೊಳಿಸಿ ಕಟ್ಟಡಕ್ಕಾಗಿ ಸ್ಥಳ ಗುರುತಿಸುವ ಕಾರ್ಯವು ಪ್ರಗತಿಯಲ್ಲಿದೆ.

**ಸಂಖ್ಯೆ : ಕಾಇ 281 ಎಲ್ಎಸ್ಐ 2023**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**